**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 73 ಗ್ರಾಪಂಕಾ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:23-03-2020.

**ಸುತ್ತೋಲೆ**

**ವಿಷಯ:** ಕೋವಿಡ್-19 (ಕೊರೊನಾ ವೈರಸ್) ವ್ಯಾಪಕವಾಗಿ ಹರಡದಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮೀಣ ಕಾರ್ಯಪಡೆ (Village Taskforce) ರಚಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಇದೇ ಸಮ ಸಂಖ್ಯೆಯ ಸುತ್ತೋಲೆ ಸಂಖ್ಯೆ:ಗ್ರಾಅಪ 73 ಗ್ರಾಪಂಕಾ 2020 ದಿನಾಂಕ:06-03-2020 ಮತ್ತು 21-03-2020.

**********

ಕೋವಿಡ್-19 (ಕೊರೊನಾ ವೈರಸ್) ಕಾಯಿಲೆಯು ಸಾಂಕ್ರಾಮಿಕ ರೋಗವಾಗಿದ್ದು, ಸಾರ್ವಜನಿಕರಲ್ಲಿ ಒಬ್ಬರಿಂದ ಇನ್ನೊಬ್ಬರಿಗೆ ಹರಡುವ ಅಂಟು ಕಾಯಿಲೆಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಕಂದಾಯ ಗ್ರಾಮಗಳಲ್ಲಿ ಸಾರ್ವಜನಿಕ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಮತ್ತು ಸುರಕ್ಷತೆಯ ದೃಷ್ಟಿಯಿಂದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮತ್ತು ಪ್ರತಿಯೊಂದು ಗ್ರಾಮಗಳಲ್ಲಿ ಗ್ರಾಮ ಮಟ್ಟದ ಕಾರ್ಯಪಡೆ (Village Taskforce) ಸಮಿತಿಯನ್ನು ರಚನೆ ಮಾಡಬೇಕಾಗಿರುತ್ತದೆ.

## ಗ್ರಾಮ ಮಟ್ಟದ ಕಾರ್ಯಪಡೆ (Village Taskforce)

| ಕ್ರಸಂ. | ಸಮಿತಿ ಸದಸ್ಯರ ವಿವರ | ಹುದ್ದೆ |
|---|---|---|
| 1 | 2 | 3 |
| 1 | ಗ್ರಾಮ ಪಂಚಾಯತಿ ಅಧ್ಯಕ್ಷರು | ಅಧ್ಯಕ್ಷರು |
| 2 | ಗ್ರಾಮ ಪಂಚಾಯತಿ ಉಪಾಧ್ಯಕ್ಷರು | ಸದಸ್ಯರು |
| 3 | ಗ್ರಾಮ ಪಂಚಾಯತಿ ಸದಸ್ಯರು | ಸದಸ್ಯರು |
| 4 | ಗ್ರಾಮ ಲೆಕ್ಕಾಧಿಕಾರಿ | ಸದಸ್ಯರು |
| 5 | ಗ್ರಾಮದ ಬೀಟ್ ಪೋಲೀಸ್ | ಸದಸ್ಯರು |
| 6 | ಗ್ರಾಮದ ಆರೋಗ್ಯ ಕೇಂದ್ರದ ಸಿಬ್ಬಂದಿ | ಸದಸ್ಯರು |
| 7 | ಅಂಗನವಾಡಿ ಕಾರ್ಯಕರ್ತರು | ಸದಸ್ಯರು |
| 8 | ಆಶಾ ಕಾರ್ಯಕರ್ತರು | ಸದಸ್ಯರು |
| 9 | ನೊಂದಾಯಿತ ಸ್ಥಳೀಯ ವೈದ್ಯರು | ಸದಸ್ಯರು |
| 10 | ಪಂಚಾಯತ ಅಭಿವೃದ್ದಿ ಅಧಿಕಾರಿ | ಸದಸ್ಯ ಕಾರ್ಯದರ್ಶಿ |

ಮೇಲಿನಂತೆ ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಮತ್ತು ಕಂದಾಯ ಗ್ರಾಮಗಳಲ್ಲಿ ಗ್ರಾಮ ಮಟ್ಟದ ಕಾರ್ಯಪಡೆ (**Village Taskforce**) ಗಳನ್ನು ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಮತ್ತು ಗ್ರಾಮಗಳಲ್ಲಿ ಗ್ರಾಮೀಣ ಕಾರ್ಯಪಡೆಯನ್ನು ರಚಿಸತಕ್ಕದ್ದು. ಸದರಿ ಕಾರ್ಯಪಡೆಯ ಕರ್ತವ್ಯಗಳು ಈ ಕೆಳಗಿನಂತೆ ಇರುತ್ತದೆ.

- ಕೋವಿಡ್-19 (ಕೊರೊನಾ ವೈರಸ್) ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾಧಿಕಾರಿಗಳು ಹೊರಡಿಸಿರುವ ಮಾರ್ಗಸೂಚಿ/ಸುತ್ತೋಲೆ ಹಾಗೂ ಸೂಚನೆಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
- ಗ್ರಾಮಗಳಲ್ಲಿ 5 ಕ್ಕಿಂತ ಹೆಚ್ಚು ಜನರು ಗುಂಪಾಗಿ ಸೇರದಂತೆ ನೋಡಿಕೊಳ್ಳತಕ್ಕದ್ದು.
- ಗ್ರಾಮೀಣ ಭಾಗದಲ್ಲಿ ಸಾರ್ವಜನಿಕ ಸ್ಥಳಗಳಾದ ಬಾವಿ, ಕೆರೆ, ನದಿ ಸ್ಥಳಗಳಲ್ಲಿ ಸಾರ್ವಜನಿಕರು ಗುಂಪು ಗುಂಪಾಗಿ ಸೇರುವುದನ್ನು ತಪ್ಪಿಸುವುದು.
- ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಯೊಬ್ಬರು ಕನಿಷ್ಠ 6 ಅಡಿ ಅಂತರ ಕಾಯ್ದುಕೊಳ್ಳಬೇಕು ಮತ್ತು ಯಾರನ್ನು ಮುಟ್ಟಕೂಡದು.
- ಕೊರೊನಾ ಕಾಯಿಲೆಯ ಬಗ್ಗೆ ಗ್ರಾಮಗಳಲ್ಲಿ ಸುಳ್ಳು ವದಂತಿಗಳನ್ನು ಹರಡದಂತೆ ಕಾರ್ಯಪಡೆಯು ನೋಡಿಕೊಳ್ಳಬೇಕು.
- ಗ್ರಾಮೀಣ ಭಾಗದಲ್ಲಿ ಮದುವೆ, ಜಾತ್ರೆ, ಮೆರವಣಿಗೆ, ಸಂತೆ ಹಾಗೂ ಗುಂಪು ಚಟುವಟಿಕೆಗಳನ್ನು ಗ್ರಾಮೀಣ ಕಾರ್ಯಪಡೆ (Village Taskforce) ನಿಯಂತ್ರಿಸತಕ್ಕದ್ದು.

- 65 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರ ಸಮೀಕ್ಷೆಯನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ನಿಯಮಿತವಾಗಿ ಇವರುಗಳ ಆರೋಗ್ಯವನ್ನು ಗಮನಿಸಬೇಕು.

- ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕೂಲಿ ಕಾರ್ಮಿಕರರು ಸಣ್ಣ ಸಣ್ಣ ತಂಡಗಳಲ್ಲಿ ವಿಂಗಿಡಿಸಿ ಕೆಲಸ ನಿರ್ವಹಿಸಲು ಅವಕಾಶ ಕಲ್ಪಿಸುವುದು. ಉದ್ಯೋಗ ಸ್ಥಳದಲ್ಲಿ ನಿಯಮಿತವಾಗಿ ಸ್ವಚ್ಛತೆಯಿಂದ ಇರುವ ಬಗ್ಗೆ ತಿಳುವಳಿಕೆ ನೀಡಬೇಕು. ಕೆಲಸಕ್ಕೆ ಬರುವ ಕೆಲಸಗಾರರಲ್ಲಿ ಕೊರೊನಾ ವೈರಸ್ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಿ, ಜಿಲ್ಲಾಡಳಿತದಿಂದ ಸೂಕ್ತ ಮಾರ್ಗದರ್ಶನ ಪಡೆಯಬೇಕು.

- ಗರ್ಭಿಣಿ ಮತ್ತು ಬಾಣಂತಿಯರನ್ನು ಮಹಿಳಾ ಆರೋಗ್ಯ ಕಾರ್ಯಕರ್ತೆಯರು (ANM)/ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಿಯಮಿತವಾಗಿ ಭೇಟಿ ನೀಡಿ ಇವರುಗಳ ಆರೋಗ್ಯ ಮೇಲ್ವಿಚಾರಣೆ ಮಾಡಬೇಕು ಮತ್ತು ಅಂಗನವಾಡಿ ಶಾಲೆಯ ಮಕ್ಕಳ ಆರೈಕೆ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರು ಹೆಚ್ಚಿನ ಮುತವರ್ಜಿ ವಹಿಸುವುದು.

- ಮಹಿಳಾ ಆರೋಗ್ಯ ಕಾರ್ಯಕರ್ತೆಯರು (ANM)/ ಅಂಗನವಾಡಿ / ಆಶಾ ಕಾರ್ಯಕರ್ತೆಯರು ನಿಯಮಿತವಾಗಿ ತಮ್ಮ ವ್ಯಾಪ್ತಿಯಲ್ಲಿ ನಿರಂತರ ನಿಗಾವಹಿಸಬೇಕು ಮತ್ತು ಕೆಮ್ಮು, ನೆಗಡಿ, ತಲೆ ನೋವು, ಜ್ವರ ಮತ್ತು

ಗಂಟಲಲ್ಲಿ ಉರಿತ ಲಕ್ಷಣಗಳು ಕಾಣಿಸುವಂತಹ ಜನರನ್ನು ತಕ್ಷಣ ಗುರುತಿಸಿ ಸಮೀಪದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳತಕ್ಕದ್ದು.

- ಗ್ರಾಮಗಳಲ್ಲಿ ಕೆಮ್ಮು, ನೆಗಡಿ, ತಲೆ ನೋವು, ಜ್ವರ ಮತ್ತು ಗಂಟಲಲ್ಲಿ ಉರಿತ ಲಕ್ಷಣಗಳು ಕಾಣಿಸುವಂತಹ ಜನರನ್ನು ತಕ್ಷಣ ಗುರುತಿಸಿ ಸಮೀಪದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳತಕ್ಕದ್ದು.
- ಕೊರೊನಾ ಬಾಧಿತ ವಿದೇಶದಿಂದ ಬರುವ ಭಾರತೀಯರನ್ನು ಗುರುತಿಸಿ ಇವರನ್ನು ತಪಾಸಣೆಗೆ ಒಳಪಡಿಸಬೇಕು. ಮತ್ತು Quarantine ಅಂತಹ ಗುರುತಿಸಿದವರನ್ನು 14 ದಿನಗಳವರೆಗೆ ಪ್ರತ್ಯೇಕವಾದ ಕೊಠಡಿಯಲ್ಲಿ ಇರಿಸಿ ಹೊರಗೆ ಬಾರದಂತೆ ನೋಡಿಕೊಂಡು ಚಿಕಿತ್ಸೆ ನೀಡಬೇಕು ಹಾಗೂ ಇವರು ಸಾರ್ವಜನಿಕರೊಂದಿಗೆ ಬೆರೆಯದಂತೆ ನೋಡಿಕೊಳ್ಳಬೇಕು.
- ಮಹಿಳಾ ಆರೋಗ್ಯ ಕಾರ್ಯಕರ್ತೆಯರು (ANM)/ಅಂಗನವಾಡಿ ಕಾರ್ಯಕರ್ತೆಯರು/ ಆಶಾ ಕಾರ್ಯಕರ್ತೆಯರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಪ್ರತಿ ದಿನ ಗ್ರಾಮ ಪಂಚಾಯತಿಯಲ್ಲಿ ತೆಗೆದುಕೊಂಡ ಕ್ರಮಗಳ ಬಗ್ಗೆ ತಾಲೂಕು ಆರೋಗ್ಯ ವೈದ್ಯಾಧಿಕಾರಿಗಳು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತಿ ಇವರಿಗೆ ವರದಿಯನ್ನು ಸಲ್ಲಿಸತಕ್ಕದ್ದು.
- ಪಂಚಾಯತಿ ಅಭಿವೃದ್ದಿ ಅಧಿಕಾರಿಗಳು ಗ್ರಾಮಗಳಲ್ಲಿ ಪ್ರತಿ ದಿನ ಸ್ವಚ್ಛತೆಯನ್ನು ಕಾಯ್ದುಕೊಂಡು ಹೋಗಲು ನಿಗಾವಹಿಸಬೇಕು ಹಾಗೂ ಗ್ರಾಮಗಳನ್ನು ಸ್ವಚ್ಛಗೊಳಿಸಲು ಒಂದು ಅಭಿಯಾನ ತೆಗೆದುಕೊಂಡು

ಚರಂಡಿಗಳನ್ನು ಸ್ವಚ್ಛಗೊಳಿಸಬೇಕು. ಕಸ ವಿಲೇವಾರಿಯನ್ನು ಸರಿಯಾಗಿ ಮಾಡಬೇಕು.

- ಸ್ವಚ್ಚತಾಗಾರರು ಮತ್ತು ಘನ ತ್ಯಾಜ್ಯ ನಿರ್ವಹಣೆ ಮಾಡುವ ಸಿಬ್ಬಂದಿಗೆ ಮಾಸ್ಕ್, ಗ್ಲೌಸ್ ಮತ್ತು ಬೂಟ್ಸ್ (ಫುಟ್‌ವೇರ್) ಗಳನ್ನು ಒದಗಿಸಬೇಕು. ಸ್ವಚ್ಛತಗಾರರಲ್ಲಿ ಕೊರೊನಾ ವೈರಸ್ ಬಗ್ಗೆ ಮುಂಜಾಗ್ರತೆಗಾಗಿ ತರಬೇತಿ ನೀಡುವುದು.
- ಕೊರೊನಾ ವೈರಸ್ ಬಗ್ಗೆ ಆರೋಗ್ಯ ಇಲಾಖೆಯಿಂದ ಮಾಹಿತಿ ಪಡೆದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಧ್ವನಿ ವರ್ಧಕದ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ನಾಗರೀಕರಲ್ಲಿ ಮೂಲ ಶುಚಿತ್ವದ ಬಗ್ಗೆ ಅರಿವು ಮೂಡಿಸುವುದು.
- ಗ್ರಾಮ ಪಂಚಾಯಿತಿ ಕಛೇರಿ, ಬಸ್ ಸ್ಟ್ಯಾಂಡ್ ಮತ್ತಿತರ ಸಾರ್ವಜನಿಕ ಸ್ಥಳಗಳಲ್ಲಿ ಶುದ್ದ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಸಾಬೂನಿನಿಂದ ಕೈತೊಳೆಯಲು ವ್ಯವಸ್ಥೆ ಮಾಡುವುದು.
- ಗ್ರಾಮ ಪಂಚಾಯಿತಿಗಳು 14ನೇ ಹಣಕಾಸು ಆಯೋಗದ ಅನುದಾನ ಅಥವಾ ಸ್ವಂತ ಸಂಪನ್ಮೂಲದಿಂದ ಅವಶ್ಯ ಮಾಸ್ಕ್‌ಗಳು, ಸಾಬೂನುಗಳು ಮತ್ತು ಸ್ಯಾನಿಟೈಸರ್ ಇತ್ಯಾದಿ ಸ್ವಚ್ಛತಾ ಪರಿಕರಗಳನ್ನು ಖರೀದಿಸುವುದು.

ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮೇಲ್ಕಂಡಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

23/3

(ಎಸ್.ಎ.ಅಶ್ರಫುಲ್ ಹಸನ್)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

23/3/2022

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.